# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ : 530**
**ಮಾನ್ಯ ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ**
**(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದರು)**
**ಉತ್ತರಿಸುವ ದಿನಾಂಕ : 12.12.2024**
**ಉತ್ತರಿಸುವ ಸಚಿವರು. : ಗೃಹ ಸಚಿವರು.**

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಪ್ರಸ್ತುತ ವರ್ಷದಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ನಡೆದಿರುವ ಅತ್ಯಾಚಾರ, ಕೊಲೆ, ದರೋಡೆ, ಡಕಾಯತಿ, ಇತ್ಯಾಧಿ ಪ್ರಕರಣಗಳ ಸಂಖ್ಯೆಯೆಷ್ಟು? ಅವುಗಳಲ್ಲಿ ಡ್ರಗ್ ಮಾಫಿಯಾ ಹಾವಳಿಯ ಸಂಬಂಧವಿರುವ ಪ್ರಕರಣಗಳು ಎಷ್ಟು;</td><td>ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಸ್ತುತ ಸಾಲಿನಲ್ಲಿ ದಾಖಲಾದ ಅಪರಾಧ ಪ್ರಕರಣಗಳ ಸಂಖ್ಯಾ ವಿವರಗಳನ್ನು ಕೆಳಗಿನಂತೆ ನೀಡಲಾಗಿದೆ.<br><br><u>ದಕ್ಷಿಣ ಕನ್ನಡ ಜಿಲ್ಲೆ</u><br><table>
<tr><th>ಅಪರಾಧ ಶೀರ್ಷಿಕೆ</th><th>ದಾಖಲಾದ ಪ್ರಕರಣಗಳ ಸಂಖ್ಯೆ</th><th>ಡ್ರಗ್ಸ್ ಮಾಫಿಯಾ ಹಾವಳಿಯ ಸಂಬಂಧವಿರುವ ಪ್ರಕರಣಗಳು ಸಂಖ್ಯೆ</th></tr>
<tr><td>ಅತ್ಯಾಚಾರ</td><td>08</td><td>-</td></tr>
<tr><td>ಕೊಲೆ</td><td>09</td><td>-</td></tr>
<tr><td>ದರೋಡೆ/ ಡಕಾಯತಿ</td><td>01</td><td>-</td></tr>
<tr><td>ಸುಲಿಗೆ</td><td>09</td><td>-</td></tr>
</table><br><u>ಉಡುಪಿ ಜಿಲ್ಲೆ</u><br><table>
<tr><th>ಅಪರಾಧ ಶೀರ್ಷಿಕೆ</th><th>ದಾಖಲಾದ ಪ್ರಕರಣಗಳ ಸಂಖ್ಯೆ</th><th>ಡ್ರಗ್ಸ್ ಮಾಫಿಯಾ ಹಾವಳಿಯ ಸಂಬಂಧವಿರುವ ಪ್ರಕರಣಗಳು ಸಂಖ್ಯೆ</th></tr>
<tr><td>ಅತ್ಯಾಚಾರ</td><td>13</td><td>-</td></tr>
<tr><td>ಕೊಲೆ</td><td>05</td><td>-</td></tr>
<tr><td>ದರೋಡೆ/ ಡಕಾಯತಿ</td><td>04</td><td>-</td></tr>
<tr><td>ಸುಲಿಗೆ</td><td>12</td><td>-</td></tr>
</table></td></tr>
<tr><td>ಆ)</td><td>ವಿದ್ಯಾರ್ಥಿಗಳು ಮತ್ತು ಯುವಕರು ಮಾದಕ ವ್ಯಸನಗಳಿಗೆ ಬಲಿಯಾಗುತ್ತಿದ್ದು ಇಸ್ಪೀಟು, ಮಟ್ಕಾ, ಅತ್ಯಾಚಾರ ಪ್ರಕರಣದಲ್ಲಿ ಡ್ರಗ್ ಮಾಫಿಯಾದ ಪಾತ್ರವಿರುವ ಬಗ್ಗೆ ಸಂಶಯವಿರುವುದರಿಂದ ಇಲ್ಲಿಯವರೆಗೆ ಎಷ್ಟು ಮಾದಕ ವ್ಯಸನ ಪ್ರಕರಣಗಳನ್ನು ಬೇಧಿಸಿ</td><td>ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಿದ್ಯಾರ್ಥಿಗಳು ಮತ್ತು ಯುವಕರು ಮಾದಕ ವ್ಯಸನಗಳಿಗೆ ಬಲಿಯಾಗುತ್ತಿರುವ ಬಗ್ಗೆ ಹಾಗೂ ಇಸ್ಪೀಟು, ಮಟ್ಕಾ, ಅತ್ಯಾಚಾರ ಪ್ರಕರಣದಲ್ಲಿ ಡ್ರಗ್ಸ್ ಮಾಫಿಯಾದ ಪಾತ್ರವಿರುವ ಬಗ್ಗೆ ಕಂಡುಬಂದಿರುವುದಿಲ್ಲ.<br><br>ಕಳೆದ ಮೂರು ವರ್ಷಗಳಲ್ಲಿ ಮಾದಕ ದ್ರವ್ಯ</td></tr>
</table>

| | | |
|---|---|---|
| | ಶಿಕ್ಷೆಗೆ ಗುರಿಪಡಿಸಲಾಗಿದೆ; | ಪ್ರಕರಣಗಳನ್ನು ಭೇದಿಸಿ ತಪ್ಪಿತಸ್ಥರನ್ನು ಶಿಕ್ಷೆಗೆ ಗುರಿಪಡಿಸಲಾಗಿರುವ ಬಗ್ಗೆ ಮಾಹಿತಿಯನ್ನು **ಅನುಬಂಧದಲ್ಲಿ ನೀಡಲಾಗಿದೆ.** |
| ಇ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹೆಚ್ಚುತ್ತಿರುವ ಅಪರಾಧ ಪ್ರಕರಣಗಳ ಹಿನ್ನಲೆಯಲ್ಲಿ ಈ ಜಿಲ್ಲೆಗಳಲ್ಲಿ ಆರ್ಥಿಕ ವ್ಯವಹಾರಗಳಲ್ಲಿ ಹೂಡಿಕೆಗೆ ತೊಂದರೆಯಾಗುತ್ತಿದ್ದು ಅಪರಾಧ ಪ್ರಕರಣಗಳನ್ನು ನಿಯಂತ್ರಿಸುವಲ್ಲಿ ಸರ್ಕಾರದಿಂದ ಯಾವ ಕ್ರಮ ಜರುಗಿಸಲಾಗುತ್ತಿದೆ; | ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಅಪರಾಧ ಪ್ರಕರಣಗಳನ್ನು ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳ ವಿವರಗಳನ್ನು ಕೆಳಕಂಡಂತೆ ನೀಡಲಾಗಿದೆ:-<br>➢ ಕಾಲಕಾಲಕ್ಕೆ ಅಪರಾಧ ತಡೆ ಮಾಸಾಚರಣೆಗಳನ್ನು ಆಚರಿಸುವ ಮೂಲಕ ವಿವಿಧ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಿ ಸಾರ್ವಜನಿಕರಲ್ಲಿ ಕಾನೂನಿನ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.<br>➢ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವ ವ್ಯಕ್ತಿಗಳು/ಸಂಘಟನೆಗಳು/ಸಾಮಾಜಿಕ ಜಾಲತಾಣಗಳ ಬಗ್ಗೆ ಸತತ ನಿಗಾ ಇಡಲಾಗಿದೆ.<br>➢ ಠಾಣಾ ವ್ಯಾಪ್ತಿಯಲ್ಲಿ ಶುಭೋದಯ (ಗುಡ್ ಮಾರ್ನಿಂಗ್) ಕಾಲದಲ್ಲಿ ಬೀಟುಗಳನ್ನು ಕೈಗೊಳ್ಳಲಾಗಿದೆ. ಏಕ ಕಾಲದಲ್ಲಿ ಜಿಲ್ಲಾ ವ್ಯಾಪ್ತಿಯಲ್ಲಿ ಕ್ಷಿಪ್ರ ವಾಹನ ತಪಾಸಣೆಗಳನ್ನು ಕೈಗೊಳ್ಳಲಾಗುತ್ತಿದೆ.<br>➢ ಅಂತರ್‌ರಾಜ್ಯ ಸಂಪರ್ಕಿಸುವ ಗಡಿಯಲ್ಲಿ ಚೆಕ್ ಪೋಸ್‌ಗಳನ್ನು ಪ್ರಾರಂಭಿಸಿದ್ದು, ಎಲ್ಲಾ ವಾಹನಗಳನ್ನು ಮತ್ತು ಸಂಶಯಿತ ವ್ಯಕ್ತಿಗಳನ್ನು ತಪಾಸಣೆ ನಡೆಸಲಾಗುತ್ತಿದೆ.<br>➢ ಸರಹದ್ದಿನಲ್ಲಿ ನಡೆಯುವ ಎಲ್ಲಾ ಬಂದೋಬಸ್ತುಗಳಿಗೆ ಗರಿಷ್ಠ ಮಟ್ಟದ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನಿಯೋಜಿಸಿ ಬಂದೋಬಸ್ತು ಕರ್ತವ್ಯವನ್ನು ಮಾಡಲಾಗುತ್ತಿದೆ.<br>➢ ಠಾಣಾ ವ್ಯಾಪ್ತಿಯಲ್ಲಿ ಶಾಂತಿ ಸಭೆ, ಯುವಜನ ಸಭೆ, ಮೊಹಲ್ಲ ಮೀಟಿಂಗ್, ನಾಗರೀಕ ಸಮಿತಿ ಸಭೆಗಳನ್ನು ನಡೆಸಿ ಸಾರ್ವಜನಿಕರಿಗೆ ಮತ್ತು ಯುವಕರಿಗೆ ತಿಳುವಳಿಕೆಗಳನ್ನು ನೀಡಲಾಗುತ್ತಿದೆ ಹಾಗೂ ವೃತ್ತ ಉಪ ವಿಭಾಗ, ಜಿಲ್ಲಾ ಮಟ್ಟದಲ್ಲಿಯೂ ಸಹ ಸಭೆಗಳನ್ನು ಕೈಗೊಳ್ಳಲಾಗುತ್ತಿದೆ.<br>➢ ಸುಧಾರಿತ ಗಸ್ತು ಪದ್ಧತಿಯನ್ನು ಜಾರಿಗೊ ಗಸ್ತು ಸಿಬ್ಬಂದಿಗಳು ಗುಪ್ತ ಮಾಹಿತಿಯನ್ನು ಕಲೆ ಹಾಕುವ ಮೂಲಕ ಅಪರಾಧ ಪ್ರಕರಣಗಳನ್ನು ನಿಯಂತ್ರಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.<br>➢ ಹಗಲು ಮತ್ತು ರಾತ್ರಿ ಗ್ರಾಮ ಗಸ್ತು ಕರ್ತವ್ಯಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲಾಗುತ್ತಿದೆ.<br>➢ ಕೋಮು ಗಲಭೆ ಹಿನ್ನಲೆಯುಳ್ಳ ವ್ಯಕ್ತಿಗಳ ಚಲನವಲನಗಳನ್ನು ಪ್ರತಿನಿತ್ಯ ಗಮನಿಸಲಾಗುತ್ತಿದೆ.<br>➢ ಠಾಣಾ ವ್ಯಾಪ್ತಿಯಲ್ಲಿನ ಕೋಮು ಹಿನ್ನಲೆಯುಳ್ಳ ಮತ್ತು ರೌಡಿ ವ್ಯಕ್ತಿಗಳಿಗೆ ಭದ್ರತಾ ಕಾಯ್ದೆಯಡಿ |

| | | |
|---|---|---|
| | | ಪ್ರಕರಣಗಳನ್ನು ದಾಖಲಿಸಿ ಕ್ರಮ ತೆಗೆದುಕೊಳ್ಳಲಾಗುತ್ತಿದೆ.<br>➢ ದೈಹಿಕ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಅಥವಾ ನ್ಯಾಯಾಲಯದ ವಿಚಾರಣೆಯಲ್ಲಿರುವ ಪ್ರಕರಣಗಳಲ್ಲಿ ಭಾಗಿಯಾದ ರೌಡಿ ಆಸಾಮಿಗಳ ಮತ್ತು ಮತೀಯ ಗೂಂಡಾಗಳು ಪುನ:ದೈಹಿಕ ಹಲ್ಲೆ ಪ್ರಕರಣದಲ್ಲಿ ಭಾಗಿಯಾದರೆ ಸದರಿ ಆರೋಪಿಗಳು ಈಗಾಗಲೇ ನ್ಯಾಯಾಲಯದಿಂದ ಪಡೆದಿರುವ ಜಾಮೀನು ರದ್ದು ಪಡಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಹಾಗೂ ಕರ್ನಾಟಕ ಪೊಲೀಸ್ ಕಾಯ್ದೆ ಅನ್ವಯ ಗಡಿಪಾರು ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ರೌಡಿ ಆಸಾಮಿಗಳು ಮತ್ತು ಮತೀಯ ಗೂಂಡಾಗಳು ಅಪರಾಧಿಕ ಪ್ರಕರಣಗಳಲ್ಲಿ ಭಾಗಿಯಾಗಿ ಕ್ರಿಮಿನಲ್ ಚಟುವಟಿಕೆಗಳಲ್ಲಿ ಮುಂದುವರೆದಿದ್ದಲ್ಲಿ ಅಂತವರನ್ನು ನಿಯಂತ್ರಣದಲ್ಲಿಡಲು ಗೂಂಡಾ ಕಾಯ್ದೆಯಂತೆ ಕ್ರಮ ಕೈಗೊಳ್ಳಲಾಗುತ್ತಿದೆ. |
| ಈ) | ರಾಜ್ಯದಲ್ಲಿ ನಡೆಯುತ್ತಿರುವ ವಿವಿಧ ಸಂಕೀರ್ಣ ರೀತಿಯ ಕಾನೂನು ಬಾಹಿರ ಚಟುವಟಿಕೆಗಳನ್ನು ತಡೆಗಟ್ಟುವ ಬಗ್ಗೆ ಇರುವ ಕಾನೂನುಗಳು ಹಳೆಯದಾಗಿದ್ದು ಅದನ್ನು ತಿದ್ದುಪಡಿ ಮಾಡಲು ಯಾವಾಗ ಕ್ರಮ ವಹಿಸಲಾಗುವುದು? | ಕಾನೂನು ಬಾಹಿರ ಚಟುವಟಿಕೆಗಳನ್ನು ತಡೆಗಟ್ಟುವ ಬಗ್ಗೆ ಇರುವ ಕಾನೂನುಗಳನ್ನು ತಿದ್ದುಪಡಿ ಮಾಡುವ ಕುರಿತು ಸದ್ಯಕ್ಕೆ ಸರ್ಕಾರ ಮುಂದೆ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಹೆಚ್‌ಡಿ 64 ಎಸ್‌ಡಿಎನ್ 2024

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು

# ಅನುಬಂಧ

## ದಕ್ಷಿಣ ಕನ್ನಡ ಜಿಲ್ಲೆ

| ವರ್ಷ | ದಾಖಲಾದ ಪ್ರಕರಣಗಳ ಸಂಖ್ಯೆ | ಶಿಕ್ಷೆಯಾದ ಪ್ರಕರಣಗಳ ಸಂಖ್ಯೆ |
|---|---|---|
| 2022 | 33 | 10 |
| 2023 | 66 | 25 |
| 2024 (30-11-2024) | 41 | 04 |

## ಉಡುಪಿ ಜಿಲ್ಲೆ

| ವರ್ಷ | ದಾಖಲಾದ ಪ್ರಕರಣಗಳ ಸಂಖ್ಯೆ | ಶಿಕ್ಷೆಯಾದ ಪ್ರಕರಣಗಳ ಸಂಖ್ಯೆ |
|---|---|---|
| 2022 | 262 | 177 |
| 2023 | 272 | 224 |
| 2024 (30-11-2024) | 109 | 78 |